# ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ ಅಧಿನಿಯಮ, 1997

06.10.2006ರ ಭಾರತ ವಿಶೇಷ ರಾಜಪತ್ರದ IXನೇ ಭಾಗದ 1ನೇ ವಿಭಾಗದ 34ನೇ ಸಂಪುಟದ 1ನೇ ಸಂಚಿಕೆಯಲ್ಲಿ 114 ರಿಂದ 120ರ ವರೆಗಿನ ಪುಟಗಳಲ್ಲಿ ಪ್ರಕಟವಾಗಿದೆ

## ವಿಷಯಾನುಕ್ರಮಣಿಕೆ

**ಪ್ರಕರಣಗಳು:**


### ಅಧ್ಯಾಯ – I

**ಪ್ರಾರಂಭಿಕ**

1. ಚಿಕ್ಕ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

### ಅಧ್ಯಾಯ – II

**ಪ್ರಾಧಿಕಾರದ ಸ್ಥಾಪನೆ**

3. ಪ್ರಾಧಿಕಾರದ ಸ್ಥಾಪನೆ
4. ಪ್ರಾಧಿಕಾರದ ರಚನೆ
5. ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನಾಗಿ ನೇಮಕಗೊಳ್ಳಲು ಅರ್ಹತೆಗಳು
6. ಕೆಲವು ಸಂದರ್ಭಗಳಲ್ಲಿ ಉಪಾಧ್ಯಕ್ಷನು ಅಧ್ಯಕ್ಷನಾಗಿ ಕಾರ್ಯ ನಿರ್ವಹಿಸುವುದು ಅಥವಾ ಅವನ ಪ್ರಕಾರ್ಯಗಳನ್ನು ನಿರ್ವಹಿಸುವುದು
7. ಪದಾವಧಿ
8. ರಾಜೀನಾಮೆ ಮತ್ತು ತೆಗೆದು ಹಾಕುವುದು
9. ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು
10. ಪ್ರಾಧಿಕಾರದಲ್ಲಿನ ಖಾಲಿ ಸ್ಥಾನದಿಂದಾಗಿ ಕಾರ್ಯಗಳು ಅಥವಾ ವ್ಯವಹರಣೆಗಳು ಅಸಿಂಧುವಾಗದಿರುವುದು

### ಅಧ್ಯಾಯ – III

**ಪ್ರಾಧಿಕಾರದ ಅಧಿಕಾರ ವ್ಯಾಪ್ತಿ ಮತ್ತು ಅಧಿಕಾರಗಳು**

11. ಪ್ರಾಧಿಕಾರಕ್ಕೆ ಅಪೀಲುಗಳು
12. ಪ್ರಾಧಿಕಾರದ ಕಾರ್ಯವಿಧಾನ ಮತ್ತು ಅಧಿಕಾರಗಳು
13. ಅಧ್ಯಕ್ಷನ ಹಣಕಾಸಿನ ಮತ್ತು ಆಡಳಿತಾತ್ಮಕ ಅಧಿಕಾರಗಳು
14. ಪ್ರಾಧಿಕಾರದ ಸಿಬ್ಬಂದಿ

### ಅಧ್ಯಾಯ – IV

**ಸಂಕೀರ್ಣ**

15. ಅಧಿಕಾರ ವ್ಯಾಪ್ತಿಯ ಪ್ರತಿಷೇಧ
16. ಪ್ರಾಧಿಕಾರದ ಮುಂದಿರುವ ವ್ಯವಹರಣೆಗಳು ನ್ಯಾಯಿಕ ವ್ಯವಹರಣೆಗಳಾಗಿರುವುದು
17. ಪ್ರಾಧಿಕಾರದ ಸದಸ್ಯರು ಮತ್ತು ಸಿಬ್ಬಂದಿಯು ಲೋಕನೌಕರರಾಗಿರುವುದು
18. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
19. ಪ್ರಾಧಿಕಾರದ ಆದೇಶಗಳನ್ನು ಪಾಲಿಸಲು ತಪ್ಪಿದ್ದಕ್ಕೆ ದಂಡ
20. ಕಂಪನಿಗಳಿಂದ ಅಪರಾಧಗಳು
21. ತೊಂದರೆಗಳನ್ನು ನಿವಾರಿಸುವ ಅಧಿಕಾರ

22. ನಿಯಮ ರಚನಾಧಿಕಾರ
23. ನಿರಸನ ಮತ್ತು ಉಳಿಸುವಿಕೆ

# ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ ಆಧಿನಿಯಮ, 1997

(1997ರ ಅಧಿನಿಯಮ ಸಂಖ್ಯೆ 22)

[26ನೇ ಮಾರ್ಚ್, 1997]

ಯಾವ ಪ್ರದೇಶಗಳಲ್ಲಿ ಯಾವುವೇ ಕೈಗಾರಿಕೆಗಳನ್ನು, ಕಾರ್ಯಾಚರಣೆಗಳನ್ನು ಅಥವಾ ಸಂಸ್ಕರಣೆಗಳನ್ನು ಅಥವಾ ಕೈಗಾರಿಕೆಗಳ, ಕಾರ್ಯಾಚರಣೆಗಳ ಅಥವಾ ಸಂಸ್ಕರಣೆಗಳ ವರ್ಗವನ್ನು ನಡೆಸತಕ್ಕದ್ದಲ್ಲವೋ ಅಥವಾ ಪರಿಸರ (ಸಂರಕ್ಷಣೆ) ಅಧಿನಿಯಮ, 1986ರ ಮೇರೆಗೆ ಕೆಲವು ಸುರಕ್ಷಾ ಕ್ರಮಗಳಿಗೆ ಒಳಪಟ್ಟು ನಡೆಸತಕ್ಕದ್ದೋ, ಅಂಥ ಪ್ರದೇಶಗಳನ್ನು ಪರಿಮಿತಿಗೊಳಿಸುವುದಕ್ಕೆ ಸಂಬಂಧಿಸಿದ ಅಪೀಲುಗಳನ್ನು ವಿಚಾರಣೆ ಮಾಡಲು ಒಂದು ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರದ ಸ್ಥಾಪನೆಗಾಗಿ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವ ಅಧಿನಿಯಮ.

ಭಾರತದ ಗಣರಾಜ್ಯದ ನಲವತ್ತೆಂಟನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:

## ಅಧ್ಯಾಯ – I

### ಪ್ರಾರಂಭಿಕ

**1. ಚಿಕ್ಕ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ ಅಧಿನಿಯಮ, 1997 ಎಂದು ಕರೆಯತಕ್ಕದ್ದು.

(2) ಇದು 1997ರ ಜನವರಿ 30ರಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು

(ಎ) "ಅಧಿನಿಯಮ" ಎಂದರೆ ಪರಿಸರ (ಸಂರಕ್ಷಣೆ) ಅಧಿನಿಯಮ, 1986;

(ಬಿ) "ಪ್ರಾಧಿಕಾರ" ಎಂದರೆ 3ನೇ ಪ್ರಕರಣದ (1)ನೇ ಉಪಪ್ರಕರಣದ ಮೇರೆಗೆ ಸ್ಥಾಪಿತವಾದ ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ;

(ಸಿ) "ಅಧ್ಯಕ್ಷ" ಎಂದರೆ ಪ್ರಾಧಿಕಾರದ ಅಧ್ಯಕ್ಷ;

(ಡಿ) "ಸದಸ್ಯ" ಎಂದರೆ ಪ್ರಾಧಿಕಾರದ ಸದಸ್ಯ;

(ಇ) "ನಿಯಮಿಸಲಾದುದು" ಎಂದರೆ ಈ ಅಧಿನಿಯಮದ ಮೇರೆಗೆ ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಫ್) "ಉಪಾಧ್ಯಕ್ಷ" ಎಂದರೆ ಪ್ರಾಧಿಕಾರದ ಉಪಾಧ್ಯಕ್ಷ.

## ಅಧ್ಯಾಯ– II

### ಪ್ರಾಧಿಕಾರದ ಸ್ಥಾಪನೆ

**3. ಪ್ರಾಧಿಕಾರದ ಸ್ಥಾಪನೆ.–** (1) ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು, ಈ ಅಧಿನಿಯಮದ ಮೇರೆಗೆ ಅದಕ್ಕೆ ಪ್ರದಾನ ಮಾಡಲಾಗಿರುವ ಅಧಿಕಾರಗಳನ್ನು ಚಲಾಯಿಸಲು ಮತ್ತು ಅದಕ್ಕೆ ವಹಿಸಿದ ಪ್ರಕಾರ್ಯಗಳನ್ನು ನೆರವೇರಿಸಲು ಸ್ಥಾಪಿಸತಕ್ಕದ್ದು.

(2) ಪ್ರಾಧಿಕಾರದ ಪ್ರಧಾನ ಕಾರ್ಯಾಲಯವು ದೆಹಲಿಯಲ್ಲಿ ಇರತಕ್ಕದ್ದು.

**4. ಪ್ರಾಧಿಕಾರದ ರಚನೆ.–** ಪ್ರಾಧಿಕಾರವು, ಒಬ್ಬ ಅಧ್ಯಕ್ಷ, ಒಬ್ಬ ಉಪಾಧ್ಯಕ್ಷ ಮತ್ತು ಕೇಂದ್ರ ಸರ್ಕಾರವು ಸೂಕ್ತವೆಂದು ಭಾವಿಸಬಹುದಾದಂಥ ಮೂವರನ್ನು ಮೀರದ ಇತರ ಸದಸ್ಯರನ್ನು ಒಳಗೊಂಡಿರತಕ್ಕದ್ದು.

**5. ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನಾಗಿ ನೇಮಕಗೊಳ್ಳಲು ಅರ್ಹತೆಗಳು.–** (1) ಒಬ್ಬ ವ್ಯಕ್ತಿಯು,

(ಎ) ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶನಾಗಿದ್ದ ಹೊರತು, ಅಥವಾ

(ಬಿ) ಒಂದು ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿದ್ದ ಹೊರತು

– ಅಧ್ಯಕ್ಷನಾಗಿ ನೇಮಕಗೊಳ್ಳಲು ಅರ್ಹನಾಗತಕ್ಕದ್ದಲ್ಲ.

(2) ಒಬ್ಬ ವ್ಯಕ್ತಿಯು,–

(ಎ) ಭಾರತ ಸರ್ಕಾರದ ಕಾರ್ಯದರ್ಶಿ ಹುದ್ದೆಯನ್ನು ಅಥವಾ ಭಾರತ ಸರ್ಕಾರದ ಕಾರ್ಯದರ್ಶಿಯ ವೇತನ ಶ್ರೇಣಿಗಿಂತ ಕಡಿಮೆಯಲ್ಲದ ವೇತನ ಶ್ರೇಣಿಯನ್ನು ಹೊಂದಿರುವ ಕೇಂದ್ರ ಅಥವಾ ರಾಜ್ಯ ಸರ್ಕಾರದ ಯಾವುದೇ ಇತರ ಹುದ್ದೆಯನ್ನು ಕಡೇಪಕ್ಷ ಎರಡು ವರ್ಷಗಳವರೆಗೆ ಧಾರಣ ಮಾಡಿದ್ದ ಹೊರತು; ಮತ್ತು

(ಬಿ) ಪರಿಸರಕ್ಕೆ ಸಂಬಂಧಿಸಿದಂತೆ ಆಡಳಿತ, ಕಾನೂನು, ವ್ಯವಸ್ಥಾಪನೆ ಅಥವಾ ತಾಂತ್ರಿಕ ವಿಷಯಗಳಲ್ಲಿ ಪರಿಣತಿ ಅಥವಾ ಅನುಭವ ಹೊಂದಿದ್ದ ಹೊರತು

– ಉಪಾಧ್ಯಕ್ಷನಾಗಿ ನೇಮಕಗೊಳ್ಳಲು ಅರ್ಹನಾಗತಕ್ಕದ್ದಲ್ಲ.

(3) ಒಬ್ಬ ವ್ಯಕ್ತಿಯು, ಪರಿಸರ ಸಂರಕ್ಷಣೆ, ನಿರ್ವಹಣೆ, ಕಾನೂನು ಅಥವಾ ಯೋಜನೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ವೃತ್ತಿಜ್ಞಾನ ಅಥವಾ ಪ್ರಾಯೋಗಿಕ ಅನುಭವ ಹೊಂದಿದ್ದ ಹೊರತು ಸದಸ್ಯನಾಗಿ ನೇಮಕಗೊಳ್ಳಲು ಅರ್ಹನಾಗತಕ್ಕದ್ದಲ್ಲ.

(4) ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರನ್ನು ರಾಷ್ಟ್ರಪತಿಯು ನೇಮಕ ಮಾಡತಕ್ಕದ್ದು.

**6. ಕೆಲವು ಸಂದರ್ಭಗಳಲ್ಲಿ ಉಪಾಧ್ಯಕ್ಷನು ಅಧ್ಯಕ್ಷನಾಗಿ ಕಾರ್ಯನಿರ್ವಹಿಸುವುದು ಅಥವಾ ಅವನ ಪ್ರಕಾರ್ಯಗಳನ್ನು ನಿರ್ವಹಿಸುವುದು.–** (1) ಅಧ್ಯಕ್ಷನ ಮರಣದ, ರಾಜೀನಾಮೆಯ ಅಥವಾ ಅನ್ಯಥಾ ಕಾರಣದಿಂದಾಗಿ ಅವನ ಪದವು ತೆರವಾಗಿರುವ ಸಂದರ್ಭದಲ್ಲಿ, ತೆರವಾದ ಅಂಥ ಪದವನ್ನು ತುಂಬುವುದಕ್ಕಾಗಿ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿ ನೇಮಕಗೊಳ್ಳುವ ಹೊಸ ಅಧ್ಯಕ್ಷನು ತನ್ನ ಪದವನ್ನು ವಹಿಸಿಕೊಳ್ಳುವ ದಿನಾಂಕದವರೆಗೆ ಉಪಾಧ್ಯಕ್ಷನು ಅಧ್ಯಕ್ಷನಾಗಿ ಕಾರ್ಯನಿರ್ವಹಿಸತಕ್ಕದ್ದು.

(2) ಗೈರು ಹಾಜರಿಯ, ಅನಾರೋಗ್ಯದ ಅಥವಾ ಯಾವುದೇ ಇತರ ಕಾರಣದಿಂದಾಗಿ ಅಧ್ಯಕ್ಷನು ತನ್ನ ಪ್ರಕಾರ್ಯಗಳನ್ನು ನಿರ್ವಹಿಸಲು ಸಾಧ್ಯವಾಗದಿದ್ದಾಗ, ಉಪಾಧ್ಯಕ್ಷನು ಅಥವಾ ಸಂದರ್ಭಾನುಸಾರ ಕೇಂದ್ರ ಸರ್ಕಾರವು ಅಧಿಸೂಚನೆಯ ಮೂಲಕ ಈ ಸಂಬಂಧವಾಗಿ ಅಧಿಕೃತಗೊಳಿಸಬಹುದಾದಂಥ ಒಬ್ಬ ಸದಸ್ಯನು, ಅಧ್ಯಕ್ಷನು ತನ್ನ ಕರ್ತವ್ಯಗಳನ್ನು ಪುನಃ ವಹಿಸಿಕೊಳ್ಳುವವರೆಗೆ ಅವನ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**7. ಪದಾವಧಿ.–** ಅಧ್ಯಕ್ಷನು, ಉಪಾಧ್ಯಕ್ಷನು ಅಥವಾ ಸದಸ್ಯನು ತನ್ನ ಪದವನ್ನು ವಹಿಸಿಕೊಂಡ ದಿನಾಂಕದಿಂದ ಮೂರು ವರ್ಷಗಳ ಅವಧಿಯವರೆಗೆ ಆ ಪದವನ್ನು ಧಾರಣ ಮಾಡತಕ್ಕದ್ದು, ಆದರೆ ಮೂರು ವರ್ಷಗಳ ಮತ್ತೊಂದು ಅವಧಿಗೆ ಪುನರ್ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು:

ಪರಂತು,

(ಎ) ಅಧ್ಯಕ್ಷನ ಸಂದರ್ಭದಲ್ಲಿ, ಅವನಿಗೆ ಎಪ್ಪತ್ತು ವರ್ಷ ವಯಸ್ಸು ತುಂಬಿದ ತರುವಾಯ; ಮತ್ತು

(ಬಿ) ಉಪಾಧ್ಯಕ್ಷನ ಅಥವಾ ಸದಸ್ಯನ ಸಂದರ್ಭದಲ್ಲಿ ಅವನಿಗೆ ಅರವತ್ತೈದು ವರ್ಷ ತುಂಬಿದ ತರುವಾಯ

– ಅಧ್ಯಕ್ಷ ಅಥವಾ ಉಪಾಧ್ಯಕ್ಷ ಅಥವಾ ಸದಸ್ಯ ಪದವನ್ನು ಧಾರಣಮಾಡತಕ್ಕದ್ದಲ್ಲ.

**8. ರಾಜೀನಾಮೆ ಮತ್ತು ತೆಗೆದು ಹಾಕುವುದು.–** (1) ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನು ತಾನು ಸಹಿ ಮಾಡಿದ ಲಿಖಿತ ನೋಟೀಸನ್ನು ರಾಷ್ಟ್ರಪತಿಗೆ ನೀಡುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು:

ಪರಂತು, ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನು ತನ್ನ ಪದವನ್ನು ತ್ಯಜಿಸಲು ಬೇಗನೆ ರಾಷ್ಟ್ರಪತಿಯಿಂದ ಅನುಮತಿ ಪಡೆದ ಹೊರತು, ಅಂಥ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ ಮೂರು ತಿಂಗಳ ಅವಧಿಯು ಮುಕ್ತಾಯವಾಗುವವರೆಗೆ ಅಥವಾ ತನ್ನ ಉತ್ತರಾಧಿಕಾರಿಯಾಗಿ ಯುಕ್ತವಾಗಿ ನೇಮಕಗೊಳ್ಳುವ ವ್ಯಕ್ತಿಯು ಆ ಪದವನ್ನು ವಹಿಸಿಕೊಳ್ಳುವವರೆಗೆ ಅಥವಾ ತನ್ನ ಪದಾವಧಿಯು ಮುಕ್ತಾಯವಾಗುವವರೆಗೆ,

– ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪದದಲ್ಲಿರುವುದು ಮುಂದುವರಿಯತಕ್ಕದ್ದು.

(2) ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನ ದುರ್ವರ್ತನೆ ಅಥವಾ ಅಸಮರ್ಥತೆಯ ಬಗ್ಗೆ ಸರ್ವೋಚ್ಚ ನ್ಯಾಯಾಲಯದ ಒಬ್ಬ ನ್ಯಾಯಾಧೀಶನು ವಿಚಾರಣೆ ನಡೆಸಿ ಅಂಥ ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನಿಗೆ ಅವನ ವಿರುದ್ಧದ ಆರೋಪವನ್ನು ತಿಳಿಸಿ ಆ ಆರೋಪಗಳ ಬಗ್ಗೆ ಅಹವಾಲನ್ನು ಹೇಳಿಕೊಳ್ಳಲು ಅವನಿಗೆ ಒಂದು ಯುಕ್ತ ಅವಕಾಶ ನೀಡಿದ ತರುವಾಯ, ದುರ್ವರ್ತನೆ ಅಥವಾ ಅಸಮರ್ಥತೆಯು ರುಜುವಾತಾದ ಆಧಾರದ ಮೇಲೆ ರಾಷ್ಟ್ರಪತಿಯು ಹೊರಡಿಸಿದ ಆದೇಶದ ಮೂಲಕವಲ್ಲದೆ ಅಂಥ ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನನ್ನು ಅವನ ಪದದಿಂದ ತೆಗೆದುಹಾಕತಕ್ಕದ್ದಲ್ಲ.

(3) ಯಾರ ಸಂಬಂಧದಲ್ಲಿ (2)ನೇ ಉಪಪ್ರಕರಣದ ಮೇರೆಗೆ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖಿಸಲಾಗಿದೆಯೋ, ಆ ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನನ್ನು ಅಂಥ ಉಲ್ಲೇಖದ ಮೇಲೆ ಸರ್ವೋಚ್ಚ ನ್ಯಾಯಾಲಯದಿಂದ ವರದಿ ಬಂದ ಮೇಲೆ ರಾಷ್ಟ್ರಪತಿಯು ಆದೇಶ ಮಾಡುವವರೆಗೆ ಪದದಿಂದ ಅಮಾನತಿನಲ್ಲಿಡಬಹುದು.

(4) (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾಗಿರುವ ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನ ದುರ್ವರ್ತನೆಯ ಅಥವಾ ಅಸಮರ್ಥತೆಯ ಬಗ್ಗೆ ತನಿಖೆ ಮಾಡಲು ಕೇಂದ್ರ ಸರ್ಕಾರವು ನಿಯಮಗಳ ಮೂಲಕ ಕಾರ್ಯವಿಧಾನವನ್ನು ವಿನಿಯಮಿಸಬಹುದು.

**9. ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು.–** ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯನಿಗೆ ಸಂದಾಯವಾಗತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆ ಮತ್ತು ಷರತ್ತುಗಳು (ನಿವೃತ್ತಿ ವೇತನ, ಉಪದಾನ ಮತ್ತು ಇತರ ನಿವೃತ್ತಿ ಸೌಲಭ್ಯಗಳೂ ಸೇರಿದಂತೆ) ಕೇಂದ್ರ ಸರ್ಕಾರವು ನಿಯಮಿಸಬಹುದಾದಂತೆ ಇರತಕ್ಕದ್ದು.

**10. ಪ್ರಾಧಿಕಾರದಲ್ಲಿನ ಖಾಲಿ ಸ್ಥಾನದಿಂದಾಗಿ ಕಾರ್ಯಗಳು ಅಥವಾ ವ್ಯವಹರಣೆಗಳು ಅಸಿಂಧುವಾಗದಿರುವುದು.–** ಪ್ರಾಧಿಕಾರದಲ್ಲಿ ಯಾವುದೇ ಸ್ಥಾನವು ಖಾಲಿಯಿದೆಯೆಂಬ ಅಥವಾ ಅದರ ರಚನೆಯಲ್ಲಿ ಯಾವುದೇ ದೋಷವಿದೆಯೆಂಬ ಕಾರಣ ಮಾತ್ರದಿಂದ ಪ್ರಾಧಿಕಾರದ ಯಾವುದೇ ಕಾರ್ಯ ಅಥವಾ ವ್ಯವಹರಣೆಗಳನ್ನು ಪ್ರಶ್ನಿಸತಕ್ಕದ್ದಲ್ಲ ಅಥವಾ ಅವು ಅಸಿಂಧುಗೊಳ್ಳತಕ್ಕದ್ದಲ್ಲ.

## ಅಧ್ಯಾಯ– III

## ಪ್ರಾಧಿಕಾರದ ಅಧಿಕಾರ ವ್ಯಾಪ್ತಿ ಮತ್ತು ಅಧಿಕಾರಗಳು

**11. ಪ್ರಾಧಿಕಾರಕ್ಕೆ ಅಪೀಲುಗಳು.–** (1) ಯಾವುವೇ ಕೈಗಾರಿಕೆಗಳನ್ನು, ಕಾರ್ಯಾಚರಣೆಗಳನ್ನು ಅಥವಾ ಸಂಸ್ಕರಣೆಗಳನ್ನು ಅಥವಾ ಕೈಗಾರಿಕೆಗಳ, ಕಾರ್ಯಾಚರಣೆಗಳ ಮತ್ತು ಸಂಸ್ಕರಣೆಗಳ ವರ್ಗವನ್ನು ಯಾವ ಪ್ರದೇಶಗಳಲ್ಲಿ ನಡೆಸತಕ್ಕದ್ದಲ್ಲವೆಂಬ ಅಥವಾ ಕೆಲವು ಸುರಕ್ಷಾ ಕ್ರಮಗಳಿಗೆ ಒಳಪಟ್ಟು ಯಾವ ಪ್ರದೇಶಗಳಲ್ಲಿ ನಡೆಸತಕ್ಕದ್ದು ಎಂಬ ಬಗ್ಗೆ ನೀಡಿದ ಪರಿಸರ ಸಂಬಂಧಿ ಒಪ್ಪಿಗೆಯ ಆದೇಶದಿಂದ ಬಾಧಿತನಾದ ಯಾರೇ ವ್ಯಕ್ತಿಯು, ಅಂಥ ಆದೇಶದ ದಿನಾಂಕದಿಂದ ಮೂವತ್ತು ದಿನಗಳ ಒಳಗಾಗಿ ನಿಯಮಿಸಬಹುದಾದಂಥ ನಮೂನೆಯಲ್ಲಿ ಪ್ರಾಧಿಕಾರಕ್ಕೆ ಅಪೀಲನ್ನು ಸಲ್ಲಿಸಬಹುದು:

ಪರಂತು, ಅಪೀಲುದಾರನು ಸಕಾಲದಲ್ಲಿ ಅಪೀಲನ್ನು ಸಲ್ಲಿಸಲು ಸಾಕಷ್ಟು ಕಾರಣಗಳಿಂದಾಗಿ ಪ್ರತಿಬಂಧಿತನಾಗಿದ್ದನೆಂದು ಪ್ರಾಧಿಕಾರಕ್ಕೆ ಮನದಟ್ಟಾದರೆ, ಅದು ಸದರಿ ಮೂವತ್ತು ದಿನಗಳ ಅವಧಿಯು ಮುಕ್ತಾಯವಾದ ತರುವಾಯ, ಆದರೆ ಮೇಲೆ ಹೇಳಿದ ದಿನಾಂಕದಿಂದ ತೊಂಬತ್ತು ದಿನಗಳಿಗೆ ಮೀರದಂತೆ, ಸಲ್ಲಿಸಿದ ಯಾವುದೇ ಅಪೀಲನ್ನು ಪುರಸ್ಕರಿಸಬಹುದು.

(2) (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ, "ವ್ಯಕ್ತಿ" ಎಂದರೆ,

(ಎ) ಪರಿಸರ ಸಂಬಂಧಿ ಒಪ್ಪಿಗೆಯಿಂದ ಬಾಧಿತನಾಗುವ ಸಂಭವವಿರುವ ಯಾರೇ ವ್ಯಕ್ತಿ;

(ಬಿ) ಪ್ರಾಜೆಕ್ಟ್‌ನ ಒಡೆತನ ಹೊಂದಿರುವ ಅಥವಾ ಅದರ ಮೇಲೆ ನಿಯಂತ್ರಣ ಹೊಂದಿರುವ ಮತ್ತು ಆ ಕುರಿತು ಪರಿಸರ ಸಂಬಂಧಿ ಒಪ್ಪಿಗೆಗಾಗಿ ಅರ್ಜಿಯನ್ನು ಸಲ್ಲಿಸಿರುವಂಥ ಯಾರೇ ವ್ಯಕ್ತಿ;

(ಸಿ) ಅಂಥ ಆದೇಶದಿಂದ ಬಾಧಿತರಾಗುವ ಸಂಭವವಿರುವ ಮತ್ತು ಪರಿಸರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವ್ಯಕ್ತಿಗಳ ಸಂಘ (ನಿಗಮಿತವಾಗಿರಲಿ ಅಥವಾ ಇಲ್ಲದಿರಲಿ);

(ಡಿ) ರಾಜ್ಯ ಸರ್ಕಾರವು ಪರಿಸರ ಸಂಬಂಧಿ ಒಪ್ಪಿಗೆ ನೀಡಿರುವಲ್ಲಿ ಕೇಂದ್ರ ಸರ್ಕಾರ ಮತ್ತು ಕೇಂದ್ರ ಸರ್ಕಾರವು ಪರಿಸರ ಸಂಬಂಧಿ ಒಪ್ಪಿಗೆ ನೀಡಿರುವಲ್ಲಿ ರಾಜ್ಯ ಸರ್ಕಾರ; ಅಥವಾ

(ಇ) ಪ್ರಾಜೆಕ್ಟನ್ನು ಸ್ಥಾಪಿಸಲು ಉದ್ದೇಶಿಸಲಾಗಿರುವ ಪ್ರದೇಶದ ನೆರೆಹೊರೆಯೊಳಗೆ ಆ ಪ್ರದೇಶದ ಸ್ಥಳೀಯ ಪರಿಮಿತಿಗಳ ಯಾವ ಭಾಗವಿರುವುದೋ ಆ ಸ್ಥಳೀಯ ಪ್ರಾಧಿಕಾರ.

(3) (1)ನೇ ಉಪಪ್ರಕರಣದ ಮೇರೆಗೆ ಸಲ್ಲಿಸಿದ ಅಪೀಲನ್ನು ಸ್ವೀಕರಿಸಿದ ಮೇಲೆ ಪ್ರಾಧಿಕಾರವು ಅಪೀಲುದಾರನಿಗೆ ಅಹವಾಲನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ನೀಡಿದ ತರುವಾಯ ತಾನು ಸೂಕ್ತವೆಂದು ಭಾವಿಸುವಂಥ ಆದೇಶವನ್ನು ಹೊರಡಿಸಬಹುದು.

(4) ಅಪೀಲನ್ನು ಸಲ್ಲಿಸಿದ ದಿನಾಂಕದಿಂದ ತೊಂಬತ್ತು ದಿನಗಳ ಒಳಗೆ ಪ್ರಾಧಿಕಾರವು ಅಪೀಲನ್ನು ವಿಲೇ ಮಾಡತಕ್ಕದ್ದು:

ಪರಂತು, ಪ್ರಾಧಿಕಾರವು ಕಾರಣಗಳನ್ನು ಲಿಖಿತದಲ್ಲಿ ದಾಖಲಿಸಿ ಮೂವತ್ತು ದಿನಗಳ ಹೆಚ್ಚಿನ ಅವಧಿಯ ಒಳಗೆ ಅಪೀಲನ್ನು ವಿಲೇ ಮಾಡಬಹುದು.

**12. ಪ್ರಾಧಿಕಾರದ ಕಾರ್ಯವಿಧಾನ ಮತ್ತು ಅಧಿಕಾರಗಳು.–** (1) ಪ್ರಾಧಿಕಾರವು, ಸಿವಿಲ್ ಪ್ರಕ್ರಿಯಾ ಸಂಹಿತೆ, 1908 (1908ರ 5)ರಲ್ಲಿ ಒಳಗೊಂಡಿರುವ ಕಾರ್ಯವಿಧಾನಕ್ಕೆ ಬದ್ಧವಾಗಿರತಕ್ಕದ್ದಲ್ಲ, ಆದರೆ ಸಹಜ ನ್ಯಾಯ ತತ್ವಗಳಿಂದ ಮಾರ್ಗದರ್ಶನ ಪಡೆಯತಕ್ಕದ್ದು ಮತ್ತು ಈ ಅಧಿನಿಯಮದ ಇತರ ಉಪಬಂಧಗಳಿಗೆ ಮತ್ತು ಕೇಂದ್ರ ಸರ್ಕಾರವು ರಚಿಸಬಹುದಾದ ಯಾವುವೇ ನಿಯಮಗಳಿಗೆ ಒಳಪಟ್ಟು ಪ್ರಾಧಿಕಾರವು ತಾನು ನಡೆಸುವ ವಿಚಾರಣೆಯ ಸ್ಥಳಗಳನ್ನು ಮತ್ತು ಸಮಯವನ್ನು ಗೊತ್ತುಪಡಿಸುವುದು ಮತ್ತು ಸಾರ್ವಜನಿಕವಾಗಿ ವಿಚಾರಣೆ ನಡೆಸಬೇಕೇ ಅಥವಾ ಖಾಸಗಿಯಾಗಿ ನಡೆಸಬೇಕೇ ಎಂಬುದನ್ನು ನಿರ್ಧರಿಸುವುದೂ ಸೇರಿದಂತೆ, ತನ್ನದೇ ಆದ ಕಾರ್ಯವಿಧಾನವನ್ನು ವಿನಿಯಮಗೊಳಿಸಲು ಅಧಿಕಾರ ಹೊಂದಿರತಕ್ಕದ್ದು.

(2) ಪ್ರಾಧಿಕಾರವು ಈ ಅಧಿನಿಯಮದ ಮೇರೆಗೆ ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವ ಉದ್ದೇಶಗಳಿಗಾಗಿ ಕೆಳಕಂಡ ವಿಷಯಗಳ ಬಗ್ಗೆ ದಾವೆಯ ಅಧಿವಿಚಾರಣೆ ಮಾಡುವಾಗ ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಮೇರೆಗೆ ಒಂದು ಸಿವಿಲ್ ನ್ಯಾಯಾಲಯದಲ್ಲಿ ನಿಹಿತವಾಗಿರುವಂಥವೇ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:

(ಎ) ಯಾರೇ ವ್ಯಕ್ತಿಗೆ ಸಮನು ನೀಡುವುದು ಮತ್ತು ಅವನ ಹಾಜರಾತಿಯನ್ನು ಒತ್ತಾಯಿಸುವುದು ಮತ್ತು ಅವನನ್ನು ಪ್ರಮಾಣದ ಮೇರೆಗೆ ಪರೀಕ್ಷಿಸುವುದು;

(ಬಿ) ದಸ್ತಾವೇಜುಗಳ ಶೋಧನೆ ಮತ್ತು ಅವುಗಳನ್ನು ಹಾಜರುಪಡಿಸುವಂತೆ ಅಗತ್ಯಪಡಿಸುವುದು;

(ಸಿ) ಶಪಥ ಪತ್ರಗಳ ಮೇಲೆ ಸಾಕ್ಷ್ಯಗಳನ್ನು ಸ್ವೀಕರಿಸುವುದು;

(ಡಿ) ಭಾರತದ ಸಾಕ್ಷ್ಯ ಅಧಿನಿಯಮ, 1872 (1872ರ 1)ರ 123 ಮತ್ತು 124ನೇ ಪ್ರಕರಣಗಳ ಉಪಬಂಧಗಳಿಗೆ ಒಳಪಟ್ಟು, ಯಾವುದೇ ಕಚೇರಿಯಿಂದ ಸರ್ಕಾರಿ ದಾಖಲೆ ಅಥವಾ ದಸ್ತಾವೇಜು ಅಥವಾ ಅಂಥ ದಾಖಲೆಯ ಅಥವಾ ದಸ್ತಾವೇಜಿನ ಪ್ರತಿಯನ್ನು ಕೋರುವುದು;

(ಇ) ಸಾಕ್ಷಿಗಳು ಅಥವಾ ದಸ್ತಾವೇಜುಗಳ ಪರೀಕ್ಷೆಗೆ ಕಮೀಷನ್‌ಗಳನ್ನು ಹೊರಡಿಸುವುದು;

(ಎಫ್) ತನ್ನ ತೀರ್ಮಾನಗಳನ್ನು ಪುನರ್ ಅವಲೋಕಿಸುವುದು;

(ಜಿ) ತಪ್ಪಿನ ಮನವಿಯನ್ನು ವಜಾ ಮಾಡುವುದು ಅಥವಾ ಅದನ್ನು ಏಕಪಕ್ಷೀಯವಾಗಿ ತೀರ್ಮಾನಿಸುವುದು;

(ಹೆಚ್) ತಪ್ಪಿನ ಸಂಬಂಧದ ಯಾವುದೇ ಮನವಿಯನ್ನು ವಜಾ ಮಾಡುವ ಯಾವುದೇ ಆದೇಶವನ್ನು ಅಥವಾ ಏಕಪಕ್ಷೀಯವಾಗಿ ಅದು ಹೊರಡಿಸಿದ ಯಾವುದೇ ಆದೇಶವನ್ನು ತಳ್ಳಿಹಾಕುವುದು; ಮತ್ತು

(ಐ) ಕೇಂದ್ರ ಸರ್ಕಾರವು ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

**13. ಅಧ್ಯಕ್ಷನ ಹಣಕಾಸಿನ ಮತ್ತು ಆಡಳಿತಾತ್ಮಕ ಅಧಿಕಾರಗಳು.–** ಅಧ್ಯಕ್ಷನು ಈ ನಿಯಮಗಳ ಮೇರೆಗೆ ತನ್ನಲ್ಲಿ ನಿಹಿತಗೊಳಿಸಬಹುದಾದಂಥ ಹಣಕಾಸಿನ ಮತ್ತು ಆಡಳಿತಾತ್ಮಕ ಅಧಿಕಾರಗಳನ್ನು ಚಲಾಯಿಸತಕ್ಕದ್ದು:

ಪರಂತು, ಅಧ್ಯಕ್ಷನು ತನ್ನ ಹಣಕಾಸಿನ ಮತ್ತು ಆಡಳಿತಾತ್ಮಕ ಅಧಿಕಾರಗಳ ಪೈಕಿ ತಾನು ಸೂಕ್ತವೆಂದು ಭಾವಿಸಬಹುದಾದಷ್ಟು ಅಧಿಕಾರಗಳನ್ನು ಉಪಾಧ್ಯಕ್ಷನಿಗೆ ಅಥವಾ ಯಾರೇ ಇತರ ಅಧಿಕಾರಿಗೆ ಪ್ರತ್ಯಾಯೋಜಿಸಲು ಅಧಿಕಾರವನ್ನು ಹೊಂದಿರತಕ್ಕದ್ದು. ಉಪಾಧ್ಯಕ್ಷನು ಅಥವಾ ಅಂಥ ಯಾರೇ ಇತರ ಅಧಿಕಾರಿಯು ಅಂಥ ಪ್ರತ್ಯಾಯೋಜಿತ ಅಧಿಕಾರಗಳನ್ನು ಚಲಾಯಿಸುವಾಗ ಅವನು ಅಧ್ಯಕ್ಷನ ನಿರ್ದೇಶನ, ನಿಯಂತ್ರಣ ಮತ್ತು ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸುವುದು ಮುಂದುವರಿಯಬೇಕೆಂಬ ಷರತ್ತಿಗೆ ಒಳಪಟ್ಟಿರತಕ್ಕದ್ದು.

**14. ಪ್ರಾಧಿಕಾರದ ಸಿಬ್ಬಂದಿ.–** (1) ಪ್ರಾಧಿಕಾರವು ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವಲ್ಲಿ ಅದಕ್ಕೆ ನೆರವು ನೀಡಲು ಅಗತ್ಯವಿರುವ ಅಧಿಕಾರಗಳ ಮತ್ತು ಇತರ ನೌಕರರ ಸ್ವರೂಪ ಮತ್ತು ಪ್ರವರ್ಗಗಳನ್ನು ಕೇಂದ್ರ ಸರ್ಕಾರವು ನಿರ್ಧರಿಸತಕ್ಕದ್ದು ಮತ್ತು ಅದು ತಾನು ಸೂಕ್ತವೆಂದು ಭಾವಿಸಬಹುದಾದಂಥ ಅಧಿಕಾರಿಗಳನ್ನು ಮತ್ತು ಇತರ ನೌಕರರನ್ನು ಪ್ರಾಧಿಕಾರಕ್ಕೆ ಒದಗಿಸತಕ್ಕದ್ದು.

(2) ಪ್ರಾಧಿಕಾರದ ಅಧಿಕಾರಿಗಳು ಮತ್ತು ಇತರ ನೌಕರರು ಅಧ್ಯಕ್ಷನ ಸಾಮಾನ್ಯ ಅಧೀಕ್ಷಣೆಯಲ್ಲಿ ತಮ್ಮ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(3) ಅಧಿಕಾರಿಗಳು ಮತ್ತು ಇತರ ನೌಕರರ ಸಂಬಳಗಳು ಮತ್ತು ಭತ್ಯೆಗಳು ಮತ್ತು ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

### ಸಂಕೀರ್ಣ

**15. ಅಧಿಕಾರ ವ್ಯಾಪ್ತಿಯ ಪ್ರತಿಷೇಧ.–** ಈ ಅಧಿನಿಯಮದ ಮೂಲಕ ಅಥವಾ ಅದರ ಮೇರೆಗೆ ಯಾವುದೇ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ಅಪೀಲನ್ನು ಪುರಸ್ಕರಿಸಲು ಅಧಿಕಾರ ಹೊಂದಿರುವ ಪ್ರಾಧಿಕಾರವು ಸ್ಥಾಪನೆಯಾದ ದಿನಾಂಕದಿಂದ ಯಾವುದೇ ಸಿವಿಲ್ ನ್ಯಾಯಾಲಯ ಅಥವಾ ಇತರ ಪ್ರಾಧಿಕಾರಕ್ಕೆ ಯಾವುದೇ ಅಪೀಲನ್ನು ಸ್ವೀಕರಿಸಲು ಅಧಿಕಾರ ವ್ಯಾಪ್ತಿ ಇರತಕ್ಕದ್ದಲ್ಲ.

**16. ಪ್ರಾಧಿಕಾರದ ಮುಂದಿರುವ ವ್ಯವಹರಣೆಗಳು ನ್ಯಾಯಿಕ ವ್ಯವಹರಣೆಗಳಾಗಿರುವುದು.–** ಪ್ರಾಧಿಕಾರದ ಮುಂದಿರುವ ಎಲ್ಲ ವ್ಯವಹರಣೆಗಳನ್ನು ಭಾರತ ದಂಡ ಸಂಹಿತೆಯ (1860ರ 45) 193, 219 ಮತ್ತು 228ನೇ ಪ್ರಕರಣಗಳ ಅರ್ಥವ್ಯಾಪ್ತಿಯೊಳಗೆ ನ್ಯಾಯಿಕ ವ್ಯವಹರಣೆಗಳೆಂಬುದಾಗಿ ಭಾವಿಸತಕ್ಕದ್ದು.

**17. ಪ್ರಾಧಿಕಾರದ ಸದಸ್ಯರು ಮತ್ತು ಸಿಬ್ಬಂದಿಯು ಲೋಕನೌಕರರಾಗಿರುವುದು.–** ಪ್ರಾಧಿಕಾರದ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಇತರ ನೌಕರರನ್ನು ಭಾರತ ದಂಡ ಸಂಹಿತೆಯ (1860ರ 45) 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕನೌಕರರೆಂಬುದಾಗಿ ಭಾವಿಸತಕ್ಕದ್ದು.

**18. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಆದೇಶಕ್ಕೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ಕೇಂದ್ರ ಸರ್ಕಾರದ ವಿರುದ್ಧ ಅಥವಾ ಪ್ರಾಧಿಕಾರದ ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯ ಅಥವಾ ಅಧ್ಯಕ್ಷನಿಂದ, ಉಪಾಧ್ಯಕ್ಷನಿಂದ ಅಥವಾ ಸದಸ್ಯನಿಂದ ಅಧಿಕೃತಗೊಂಡ ಯಾರೇ ಇತರ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರ ಕಾನೂನು ವ್ಯವಹರಣೆಯನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**19. ಪ್ರಾಧಿಕಾರದ ಆದೇಶಗಳನ್ನು ಪಾಲಿಸಲು ತಪ್ಪಿದ್ದಕ್ಕೆ ದಂಡ.–** ಪ್ರಾಧಿಕಾರವು ಮಾಡಿದ ಯಾವುದೇ ಆದೇಶವನ್ನು ಪಾಲಿಸಲು ತಪ್ಪುವ ಯಾರೇ ವ್ಯಕ್ತಿಯು ಏಳು ವರ್ಷಗಳ ಅವಧಿಯವರೆಗಿನ ಕಾರಾವಾಸದಿಂದ ಅಥವಾ ಒಂದು ಲಕ್ಷ ರೂಪಾಯಿಯವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ದಂಡನೀಯನಾಗತಕ್ಕದ್ದು.

**20. ಕಂಪನಿಗಳಿಂದ ಅಪರಾಧಗಳು.–** (1) ಈ ಅಧಿನಿಯಮದ ಮೇರೆಗಿನ ಯಾವುದೇ ಅಪರಾಧಗಳನ್ನು ಒಂದು ಕಂಪನಿಯು ಮಾಡಿರುವಲ್ಲಿ, ಅಂಥ ಅಪರಾಧವು ನಡೆದ ಸಮಯದಲ್ಲಿ ನೇರವಾಗಿ ಕಂಪನಿಯ ಪ್ರಭಾರ ಹೊಂದಿದ್ದ ಮತ್ತು ಕಂಪನಿಯ ವ್ಯವಹಾರ ನಿರ್ವಹಣೆಗೆ ಹಾಗೂ ಕಂಪನಿಗೆ ಜವಾಬ್ದಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಅಂಥ ಅಪರಾಧದ ತಪ್ಪಿತಸ್ಥರೆಂದು ಭಾವಿಸತಕ್ಕದ್ದು ಮತ್ತು ಅವನು ತನ್ನ ವಿರುದ್ಧದ ವ್ಯವಹರಣೆಗೆ ಗುರಿಯಾಗಲು ಬದ್ಧನಾಗಿರತಕ್ಕದ್ದು ಮತ್ತು ತದನುಸಾರವಾಗಿ ದಂಡಿತನಾಗತಕ್ಕದ್ದು:

ಪರಂತು, ಈ ಉಪಪ್ರಕರಣದಲ್ಲಿ ಏನೇ ಇದ್ದರೂ, ಅಂಥ ಅಪರಾಧವು ತನ್ನ ತಿಳಿವಳಿಕೆಗೆ ಬಾರದೆ ನಡೆಯಿತೆಂದು ಅಥವಾ ಅಂಥ ಅಪರಾಧ ನಡೆಯುವುದನ್ನು ತಡೆಗಟ್ಟಲು ತಾನು ಎಲ್ಲ ಯುಕ್ತ ಜಾಗರೂಕತೆ ವಹಿಸಿದ್ದೆನೆಂದು ಅಂಥ ಯಾರೇ ವ್ಯಕ್ತಿಯು ರುಜುವಾತುಪಡಿಸಿದರೆ ಅವನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ಯಾವುದೇ ದಂಡನೆಗೆ ಗುರಿಯಾಗತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ, ಈ ಅಧಿನಿಯಮದ ಮೇರೆಗಿನ ಒಂದು ಅಪರಾಧವನ್ನು ಕಂಪನಿಯು ಮಾಡಿರುವಲ್ಲಿ ಮತ್ತು ಅಪರಾಧವು ಕಂಪನಿಯ ಯಾರೇ ನಿರ್ದೇಶಕ, ವ್ಯವಸ್ಥಾಪಕ ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ಅಥವಾ ಪರೋಕ್ಷ ಸಮ್ಮತಿಯಿಂದ ನಡೆಯಿತೆಂದು ರುಜುವಾತಾದರೆ ಅಥವಾ ಅದನ್ನು ಅವನ ನಿರ್ಲಕ್ಷ್ಯತೆಗೆ ಆರೋಪಿಸಬಹುದಾದರೆ, ಅಂಥ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯನ್ನು ಸಹ ಆ ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು ಮತ್ತು ಅವನು ತನ್ನ ವಿರುದ್ಧದ ವ್ಯವಹರಣೆಗೆ ಗುರಿಯಾಗತಕ್ಕದ್ದು ಮತ್ತು ತದನುಸಾರವಾಗಿ ದಂಡಿತನಾಗತಕ್ಕದ್ದು.

**ವಿವರಣೆ.–** ಈ ಪ್ರಕರಣದ ಉದ್ದೇಶಗಳಿಗಾಗಿ,–

(ಎ) "ಕಂಪನಿ" ಎಂದರೆ ಯಾವುದೇ ನಿಗಮಿತ ನಿಕಾಯ ಮತ್ತು ಅದು ಒಂದು ಫರ್ಮನ್ನು ಅಥವಾ ವ್ಯಕ್ತಿಗಳ ಇತರ ಸಂಘವನ್ನು ಒಳಗೊಳ್ಳುತ್ತದೆ; ಮತ್ತು

(ಬಿ) ಒಂದು ಫರ್ಮಿಗೆ ಸಂಬಂಧಪಟ್ಟಂತೆ "ನಿರ್ದೇಶಕ" ಎಂದರೆ, ಫರ್ಮಿನ ಪಾಲುದಾರ.

**21. ತೊಂದರೆಗಳನ್ನು ನಿವಾರಿಸುವ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವಲ್ಲಿ ಯಾವುದೇ ತೊಂದರೆಯು ಉದ್ಭವಿಸಿದರೆ, ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಆದೇಶವನ್ನು ಹೊರಡಿಸಿ ತೊಂದರೆಯನ್ನು ನಿವಾರಿಸಲು ಅವಶ್ಯಕವೆಂದು ಅಥವಾ ಯುಕ್ತವೆಂದು ತನಗೆ ತೋರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ಕಲ್ಪಿಸಬಹುದು:

ಪರಂತು, ಈ ಅಧಿನಿಯಮವು ರಾಷ್ಟ್ರಪತಿಯ ಒಪ್ಪಿಗೆ ಪಡೆದ ದಿನಾಂಕದಿಂದ ಮೂರು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ, ಅಂಥ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ಮಾಡಿದ ತರುವಾಯ ಆದಷ್ಟು ಬೇಗನೆ ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಇಡತಕ್ಕದ್ದು.

**22. ನಿಯಮ ರಚನಾಧಿಕಾರ.–** (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸಲು ಅಧಿಸೂಚನೆ ಹೊರಡಿಸಿ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಪೂರ್ವೋಕ್ತ ಅಧಿಕಾರದ ಸಾಮಾನ್ಯಾಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳು ಈ ಮುಂದಿನ ಎಲ್ಲಾ ವಿಷಯಗಳಿಗೆ ಅಥವಾ ಆ ಪೈಕಿ ಯಾವುದೇ ವಿಷಯದ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ:

(ಎ) ಅಧ್ಯಕ್ಷ, ಉಪಾಧ್ಯಕ್ಷ ಅಥವಾ ಸದಸ್ಯನ ದುರ್ವರ್ತನೆ ಅಥವಾ ಅಸಮರ್ಥತೆಯ ಬಗ್ಗೆ ತನಿಖೆ ಮಾಡಲು 8ನೇ ಪ್ರಕರಣದ (4)ನೇ ಉಪಪ್ರಕರಣದ ಮೇರೆಗಿನ ಕಾರ್ಯವಿಧಾನ;

(ಬಿ) 9ನೇ ಪ್ರಕರಣದ ಮೇರೆಗೆ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯನಿಗೆ ಸಂದಾಯವಾಗತಕ್ಕ ಸಂಬಳಗಳು ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಸಿ) 11ನೇ ಪ್ರಕರಣದ (1)ನೇ ಉಪಪ್ರಕರಣದ ಮೇರೆಗೆ ಸಲ್ಲಿಸತಕ್ಕ ಅಪೀಲಿನ ನಮೂನೆ;

(ಡಿ) 13ನೇ ಪ್ರಕರಣದ ಮೇರೆಗೆ ಅಧ್ಯಕ್ಷನ ಹಣಕಾಸಿನ ಮತ್ತು ಆಡಳಿತಾತ್ಮಕ ಅಧಿಕಾರಗಳು;

(ಇ) ಪ್ರಾಧಿಕಾರದ ಅಧಿಕಾರಿಗಳು ಮತ್ತು ಇತರ ನೌಕರರ ಸಂಬಳಗಳು, ಭತ್ಯೆಗಳು ಮತ್ತು ಸೇವಾ ಷರತ್ತುಗಳು;

(ಎಫ್) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಇತರ ಯಾವುದೇ ವಿಷಯ.

(3) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಅದು ಅಧಿವೇಶನದಲ್ಲಿರುವಾಗ ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚಿನ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಇರಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ಒಂದಾದ ಮೇಲೊಂದರಂತೆ ಬರುವ ಅಧಿವೇಶನಗಳ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ನಿಯಮವು ಆ ತರುವಾಯ ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದರೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟುಮಾಡತಕ್ಕದ್ದಲ್ಲ.

**23. ನಿರಸನ ಮತ್ತು ಉಳಿಸುವಿಕೆ.–** (1) ರಾಷ್ಟ್ರೀಯ ಪರಿಸರ ಅಪೀಲು ಪ್ರಾಧಿಕಾರ ಅಧ್ಯಾದೇಶ, 1997 (1997ರ 12) ಇದನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸಿತವಾಗಿದ್ದರೂ, ಸದರಿ ಅಧ್ಯಾದೇಶದ ಮೇರೆಗೆ ಮಾಡಿದ ಯಾವುದೇ ಕಾರ್ಯ ಅಥವಾ ಕೈಗೊಂಡ ಯಾವುದೇ ಕ್ರಮವನ್ನು ಈ ಅಧಿನಿಯಮದ ಸಂವಾದಿ ಉಪಬಂಧಗಳ ಮೇರೆಗೆ ಮಾಡಲಾಗಿದೆಯೆಂದು ಅಥವಾ ಕೈಗೊಳ್ಳಲಾಗಿದೆಯೆಂದು ಭಾವಿಸತಕ್ಕದ್ದು.

* * *